**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ರವರ ನ್ಯಾಯಾಲಯ,**

**ಟಿ.ನರಸೀಪುರ**

**ದಿನಾಂಕ 22 ನೇ ಜನವರಿ 2025**

**ಸಿಸಿ ಸಂಖ್ಯೆ: 1287/2025**

ಫಿರ್ಯಾದಿಃ : ರಾಜ್ಯದ ಪರವಾಗಿ ತಲಕಾಡು ಪೊಲೀಸ್ ಠಾಣೆ

ವಿರುದ್ಧ

ಆರೋಪಿಗಳು : 1. ಉತ್ತನಳ್ಳಿಯಪ್ಪ ಬಿನ್ ಮುನಿ ಅರಸು,
ವಯಸ್ಸು 75 ವರ್ಷ.

2. ಅಂಕಯಮ್ಮ ಕೋಂ ಉತ್ತನಳ್ಳಿಯಪ್ಪ
ವಯಸ್ಸು 67 ವರ್ಷ.

3. ಆಶಾ,
ವಯಸ್ಸು 40 ವರ್ಷ.

ಎಲ್ಲರ ವಾಸಃ ವಡೆಯಾಂಡಹಳ್ಳಿ ಗ್ರಾಮ, ತಲಕಾಡು ಹೋಬಳಿ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ ಎನ್.ನಿವೇದಿತಾ, 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯಾದ ನಾನು, ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.

ಮೊದಲನೆಯದಾಗಿ ದಿನಾಂಕಃ 26/06/2024 ರಂದು ಸಂಜೆ 6.00 ಗಂಟೆ ಸಮಯದಲ್ಲಿ, ತಲಕಾಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ, ವಡೆಯಾಂಡಹಳ್ಳಿ ಗ್ರಾಮದ ಸರ್ವೆ ನಂ.106/9 ರ ಜಮೀನಿನಲ್ಲಿ, ಚಾಸಾ.1 ರವರು ಜಮೀನಿಗೆ ಸರ್ವೆ ಮಾಡಿಸಿ

ಕಾಂಪೌಂಡ್ ನಿರ್ಮಿಸುತ್ತಿದ್ದಾಗ, ಮೇಲ್ಕಂಡ 1 ರಿಂದ 3 ನೇ ಆರೋಪಿತರಾದ ನೀವು ಚಾಸಾ.1 ರವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.447 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಮೇಲ್ಕಂಡ 1 ರಿಂದ 3 ನೇ ಆರೋಪಿತರಾದ ನೀವು ಚಾಸಾ.1 ರವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಕಾಂಪೌಂಡ್ ನಿರ್ಮಿಸುತ್ತಿದ್ದ ಕೆಲಸಗಾರರನ್ನು ತಡೆದು ನಿಲ್ಲಿಸಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.341 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಮೇಲ್ಕಂಡ 1 ರಿಂದ 3 ನೇ ಆರೋಪಿತರಾದ ಚಾಸಾ.1 ರವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿ ಕಾಂಪೌಂಡ್ ನಿರ್ಮಿಸುತ್ತಿದ್ದ ಕೆಲಸಗಾರರನ್ನು ತಡೆದು ನಿಲ್ಲಿಸಿದ್ದು, ಅದನ್ನು ಚಾಸಾ.1 ರವರು ಕೇಳಿದ್ದಕ್ಕೆ, 2 ಮತ್ತು 3 ನೇ ಆರೋಪಿತರಾದ ನೀವು ಚಾಸಾ.1 ರವರನ್ನು ಹಿಡಿದು ತಳ್ಳಾಡಿ ಕೈಯಿಂದ ಮೈಕೈಗೆ ಹೊಡೆದು, ತಲೆಯ ಮೇಲೆ, ಹೊಟ್ಟೆ ಮತ್ತು ಕಿವಿಯ ಮೇಲೆ ಹೊಡೆದು, ಸಾಮಾನ್ಯ ಸ್ವರೂಪದ ಗಾಯವುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.323 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ನಾಲ್ಕನೆಯದಾಗಿ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಸಮಯದಲ್ಲಿ, ಮೇಲ್ಕಂಡ 1 ನೇ ಆರೋಪಿಯಾದ ನೀವು ಚಾಸಾ.1 ರವರಿಗೆ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಗಳಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ಸಹವಾಚಕ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ.

ಪ್ರಶ್ನೆಃ ಈಗ ಓದಿ ಹೇಳಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

ಉತ್ತರಃ1 ನೇ ಆರೋಪಿಃ

ಉತ್ತರಃ2 ನೇ ಆರೋಪಿಃ

ಉತ್ತರಃ3 ನೇ ಆರೋಪಿಃ

ಪ್ರಶ್ನೆಃ ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆಯಾಗಬೇಕಾ?

ಉತ್ತರಃ1 ನೇ ಆರೋಪಿಃ

ಉತ್ತರಃ2 ನೇ ಆರೋಪಿಃ

ಉತ್ತರಃ3 ನೇ ಆರೋಪಿಃ

(ಈ ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ವಿವರಿಸಿದ ನಂತರ ಅವರು ನೀಡಿದ ಉತ್ತರವನ್ನು ನಾನು ನನ್ನ ಸ್ವಂತ ಬರಹದಲ್ಲಿ ದಾಖಲು ಮಾಡಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ. ದ. ನ್ಯಾ ದಂ., ಟಿ.ನರಸೀಪುರ.**